# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 679 (792) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 21.08.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೋಲಾರ ಜಿಲ್ಲೆಯ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಟಾಟಾ ಏರ್‌ಬಸ್ ಎಚ್ 125 ಹೆಲಿಕಾಪ್ಟರ್ ಉತ್ಪಾದನಾ ಘಟಕದಲ್ಲಿ ಪ್ರಸ್ತುತ ಒಟ್ಟು ಎಷ್ಟು ಉದ್ಯೋಗಿಗಳು ಕೆಲಸ ಮಾಡುತ್ತಿದ್ದಾರೆ; (ವಿವರ ನೀಡುವುದು) | ಟಾಟಾ ಏರ್‌ಬಸ್ ಎಚ್ 125 ಹೆಲಿಕಾಪ್ಟರ್ ಉತ್ಪಾದನಾ ಘಟಕದಲ್ಲಿ 121 ಉದ್ಯೋಗಿಗಳು ಕೆಲಸ ಮಾಡುತ್ತಿರುತ್ತಾರೆ. |
| ಆ | ಟಾಟಾ ಏರ್‌ಬಸ್ ಎಚ್ 125 ಹೆಲಿಕಾಪ್ಟರ್ ಉತ್ಪಾದನಾ ಘಟಕದಲ್ಲಿ ಎಷ್ಟು ಮಂದಿ ಕರ್ನಾಟಕ ಉದ್ಯೋಗಿಗಳು ಮತ್ತು ಸ್ಥಳೀಯ ಉದ್ಯೋಗಿಗಳಿಗೆ ಅವಕಾಶ ನೀಡಲಾಗಿದೆ; | ಸದರಿ ಘಟಕದಲ್ಲಿ 97 ಕರ್ನಾಟಕ ಉದ್ಯೋಗಿಗಳಿದ್ದು, ಸ್ಥಳೀಯ ಉದ್ಯೋಗಿಗಳಿಗೆ ಅವಕಾಶ ಕಲ್ಪಿಸಲಾಗಿರುತ್ತದೆ. |
| ಇ | ಇದರಲ್ಲಿ ಶಾಶ್ವತ ಉದ್ಯೋಗಿಗಳು ಎಷ್ಟು; ಗುತ್ತಿಗೆ ಆಧಾರದ ಉದ್ಯೋಗಿಗಳು ಎಷ್ಟು; (ವಿವರ ನೀಡುವುದು) | ಸದರಿ ಘಟಕದಲ್ಲಿ 34 ಶಾಶ್ವತ ಉದ್ಯೋಗಿಗಳು ಹಾಗೂ 63 ಗುತ್ತಿಗೆ ಆಧಾರದ ಉದ್ಯೋಗಿಗಳು ಕೆಲಸ ನಿರ್ವಹಿಸುತ್ತಿರುತ್ತಾರೆ. |
| ಈ | ಸ್ಥಳೀಯ ಉದ್ಯೋಗಿಗಳಿಗೆ ನೀಡುತ್ತಿರುವ ವೇತನ ಎಷ್ಟು? (ಮಾಹಿತಿ ನೀಡುವುದು) | ಸದರಿ ಘಟಕದಿಂದ ಸ್ಥಳೀಯ ಉದ್ಯೋಗಿಗಳಿಗೆ ಸಂಬಂಧಪಟ್ಟ ಕಾಯ್ದೆಯನುಸಾರ ವೇತನ ಪಾವತಿಸಲಾಗುತ್ತಿದೆ. |

ಕಡತ ಸಂಖ್ಯೆ. ಸಿಐ 215 ಎಸ್‌ಪಿಐ 2026

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು